# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 378 |
| ಉತ್ತರಿಸಬೇಕಾದ ದಿನಾಂಕ | : | 07.07.2023 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯಾದ್ಯಂತ ಯುವ ಸಬಲೀಕರಣ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ; ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಸ್ಥಾಪಿಸಲಾಗಿದೆ ; (ವಿವರ ನೀಡುವುದು) | ಹೌದು, ಯುವ ಸಬಲೀಕರಣ ಕೇಂದ್ರ (ಯುವ ಸ್ಪಂದನ ಕೇಂದ್ರ) ವನ್ನು ರಾಜ್ಯದ 30 ಜಿಲ್ಲೆಯಲ್ಲಿ ಇಲಾಖೆಯ ಕ್ರೀಡಾಂಗಣಗಳಲ್ಲಿ ತೆರೆಯಲಾಗಿದೆ. |
| ಆ. | ಯುವ ಸಬಲೀಕರಣ ಕೇಂದ್ರಗಳ ಗುರಿ ಮತ್ತು ಉದ್ದೇಶಗಳೇನು; ಈ ಯೋಜನೆಗಾಗಿ ಸರ್ಕಾರವು ಒದಗಿಸುತ್ತಿರುವ ಅನುದಾನವೆಷ್ಟು; (ವಿವರ ನೀಡುವುದು) | ಯುವ ಸಬಲೀಕರಣ ಕೇಂದ್ರ (ಯುವ ಸ್ಪಂದನ ಕೇಂದ್ರ) ಗಳು ಕೆಳಕಾಣಿಸಿದಂತೆ ಗುರಿ ಮತ್ತು ಉದ್ದೇಶಗಳನ್ನು ಹೊಂದಿರುತ್ತದೆ:-<br>1) ಯುವ ಜನರು ಸಬಲರಾಗಲು, ಅವರು ತಮ್ಮಲ್ಲಿನ ಸಾಮರ್ಥ್ಯಗಳನ್ನು ಕಂಡುಕೊಳ್ಳುವಲ್ಲಿ ಅಗತ್ಯ ಪೂರಕ ವಾತಾವರಣ ಮತ್ತು ಸೌಲಭ್ಯಗಳನ್ನು ಒದಗಿಸುವುದು.<br>2) ಯುವ ಜನರು ತಮ್ಮ ಜ್ಞಾನ, ಕೌಶಲ್ಯ, ಸ್ವಭಾವ ಮತ್ತು ನಡವಳಿಕೆಯನ್ನು ಉನ್ನತೀಕರಿಸಿಕೊಳ್ಳಲು ತಮ್ಮನ್ನು ಧನಾತ್ಮಕವಾಗಿ ಬದಲಾಯಿಸಿಕೊಳ್ಳುವಂತೆ ಮಾಡುವುದು.<br>3) ಯುವಜನರು ತಮ್ಮ ಪ್ರತಿಭೆ ಮತ್ತು ಸಾಮರ್ಥ್ಯಕ್ಕೆ ಸೂಕ್ತವಾದ ಶಿಕ್ಷಣ ಹಾಗೂ ಕೌಶಲ್ಯಗಳನ್ನು ಪಡೆಯಲು ಅಗತ್ಯವಾದ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುವುದು.<br>4) ಯುವಜನ ಅಭಿವೃದ್ಧಿಗಾಗಿ ಇರುವ ಎಲ್ಲಾ ಕಾರ್ಯಕ್ರಮಗಳ ಪ್ರಯೋಜನೆ ಪಡೆಯಲು ಯುವಜನರಿಗೆ ಏಕಗವಾಕ್ಷಿ ಕೇಂದ್ರವಾಗಿ ಕಾರ್ಯನಿರ್ವಹಿಸುವುದು.<br>ಈ ಯುವ ಸ್ಪಂದನ ಕಾರ್ಯಕ್ರಮದಡಿ ಯುವಜನರ ಮಾನಸಿಕ ಆರೋಗ್ಯವನ್ನು ಸದೃಢಗೊಳಿಸಲು ಮತ್ತು ಜೀವನ ಕೌಶಲ್ಯಭಿವೃದ್ಧಿ ಕಾರ್ಯಕ್ರಮವನ್ನು ನಿಮ್ಹಾನ್ಸ್ ಸಂಸ್ಥೆಯ ಸಹಯೋಗದಲ್ಲಿ ಅನುಷ್ಠಾನಗೊಳಿಸಲು 2022-23 ನೇ ಸಾಲಿಗೆ ರೂ. 200.00 ಲಕ್ಷ ಅನುದಾನವನ್ನು ನಿಮ್ಹಾನ್ಸ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ. |
| ಇ. | ರಾಜ್ಯದ ಜಿಲ್ಲೆಗಳಲ್ಲಿ ಯುವ ಸಬಲೀಕರಣ ಕೇಂದ್ರ ಸ್ಥಾಪಿಸಿ ಎಷ್ಟು ಜನ ನಿರುದ್ಯೋಗಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಇಂಟರ್ನ್ ಶಿಪ್ ತರಬೇತಿ ನೀಡಿ ಉದ್ಯೋಗ ಒದಗಿಸಲಾಗಿದೆ; (ವಿವರ ನೀಡುವುದು) | ರಾಜ್ಯದ ಜಿಲ್ಲೆಯ ಯುವ ಸಬಲೀಕರಣ ಕೇಂದ್ರ (ಯುವ ಸ್ಪಂದನ ಕೇಂದ್ರ) ದಲ್ಲಿ 29900 ಯುವಕರು ಮತ್ತು 25229 ಯುವತಿಯರು ಸೇರಿದಂತೆ ಸುಮಾರು 50 ಸಾವಿರಕ್ಕಿಂತ ಹೆಚ್ಚು ಯುವಜನರಿಗೆ ಮಾರ್ಗದರ್ಶನ (Counselling) ವನ್ನು ನೀಡಲಾಗಿದೆ. ತದನಂತರ, ಅವರನ್ನು ಕೌಶಲ್ಯಾಭಿವೃದ್ಧಿ, ಉದ್ಯೋಗ ಹಾಗೂ ತರಬೇತಿ ಇಲಾಖೆಗಳೊಂದಿಗೆ ಸಂಪರ್ಕ ಒದಗಿಸಿ, ಅವರ ಆಸಕ್ತಿಗೆ ಅನುಗುಣವಾಗಿ ವೃತ್ತಿ ಮಾರ್ಗ ಆಯ್ಕೆ ಮಾಡಲು ಸಕ್ಷಮಗೊಳಿಸಲಾಗುತ್ತಿದೆ. ನೇರವಾಗಿ ಉದ್ಯೋಗ ಅಥವಾ ಇಂಟರ್ನ್ ಶಿಪ್ ಒದಗಿಸಲು ಈ ಕಾರ್ಯಕ್ರಮದಡಿ ಬರುವುದಿಲ್ಲ. |

**ವೈಎಸ್‌ಡಿ/ಇಬಿಬಿ/48/2023**

(ಬಿ.ನಾಗೇಂದ್ರ)
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.